ಭೂಮಿಯಿಲ್ಲಿ ಅರಣ್ಯೀಕರಣ ಮತ್ತು ಪರಿಸರ ಯೋಜನೆಯನ್ನು ರಾಜ್ಯದ 23 ಜಿಲ್ಲೆಗಳ 141 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಿದೆ. 8 ವರ್ಷಗಳ ಅವಧಿಯಲ್ಲಿ 2,00,016 ಹೆಕ್ಟೇರ್ ರಕ್ಷಿತ ಅರಣ್ಯ, ಕ್ಷೀಣಿತ ಅರಣ್ಯ ಹಾಗೂ ಅರಣ್ಯೇತರ ಸರ್ಕಾರಿ ಜಮೀನಿನಲ್ಲಿ ಅರಣ್ಯೀಕರಣ ಕಾಮಗಾರಿಗಳನ್ನು ಕೈಗೊಳ್ಳಾಲಾಗಿದೆ. ಇದೇ ಅವಧಿಯಲ್ಲಿ ರೈತರ ಹಾಗೂ ಸಾರ್ವಜನಿಕರ ಜಮೀನಿನಲ್ಲಿ ನಾಟಿ ಮಾಡಲು 23.586 ಕೋಟಿ ಸಸಿಗಳನ್ನು ಉಚಿತವಾಗಿ ಮತ್ತು ರಿಯಾಯಿತಿ ದರದಲ್ಲಿ ವಿತರಿಸಲಾಗಿದೆ.

ಮುಂದುವರಿದು 2005–06ನೇ ಸಾಲಿನಿಂದ 2012–13ನೇ ಸಾಲಿನವರೆಗೆ ರೂ.745.00 ಕೋಟಿಗಳ ಆರ್ಥಿಕ ಗುರಿಯೊಂದಿಗೆ ಜೆಬಿಐಸಿ 2ನೇ ಹಂತದ ಕರ್ನಾಟಕ ಸ್ವಸ್ಥಿರ ಅರಣ್ಯ ನಿರ್ವಹಣೆ ಮತ್ತು ಜೀವಿ ವೈವಿಧ್ಯ ಸಂರಕ್ಷಣೆ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನ ಗೊಳಿಸಲಾಗುತ್ತಿದೆ. ಈ ಯೋಜನೆಯಡಿ 8 ವರ್ಷಗಳ ಅವಧಿಯಲ್ಲಿ 1,85,000 ಹೆಕ್ಟೇರ್ ಅರಣ್ಯೀಕರಣ ಹಾಗೂ 7.60 ಕೋಟಿ ಸಸಿಗಳನ್ನು ಸಾರ್ವಜನಿಕರಿಗೆ ವಿತರಿಸಲು ಗುರಿ ನಿಗದಿಪಡಿಸಿದ್ದು, ಈ ಪೈಕಿ ಬಯಲುಸೀಮೆ ಪ್ರದೇಶದ 15 ಜಿಲ್ಲೆಗಳಲ್ಲಿ 8 ವರ್ಷಗಳ ಅವಧಿಯಲ್ಲಿ 56,000 ಹೆಕ್ಟೇರ್ ಪ್ರದೇಶದಲ್ಲಿ ಅರಣ್ಯೀಕರಣ ಕಾಮಗಾರಿಯನ್ನು ಕೈಗೊಳ್ಳಲು ಹಾಗೂ 3.80 ಕೋಟಿ ಸಸಿಗಳನ್ನು ರೈತರಿಗೆ / ಸಾರ್ವಜನಿಕರಿಗೆ ವಿತರಿಸುವ ಕಾರ್ಯಕ್ರಮವಿದೆ. ಯೋಜನೆ ಒಟ್ಟು ಆರ್ಥಿಕ ಗುರಿಯ ಶೇಕಡ 34 ರಷ್ಟು ಅಂದರೆ ರೂ.253.30 ಕೋಟಿಗಳನ್ನು ಬಯಲುಸೀಮೆಯ ಪ್ರದೇಶದಲ್ಲಿ 8 ವರ್ಷಗಳ ಅವಧಿಯಲ್ಲಿ ಅರಣ್ಯೀಕರಣ, ಕೃಷಿ ಅರಣ್ಯ, ರಕ್ಷಿತ ಪ್ರದೇಶಗಳ ನಿರ್ವಹಣೆ, ಮತ್ತು ಜೀವಿ ವೈವಿಧ್ಯ ಸಂರಕ್ಷಣೆ. ಜಂಟಿ ಅರಣ್ಯ ಯೋಜನೆ ಮತ್ತು ನಿರ್ವರಣೆ ಸಂಶೋಧನೆ, ಅಧ್ಯಯನ, ತರಬೇತಿ, ಮೂಲಭೂತ ಸೌಕರ್ಯಗಳ ಒದಗಿಸುವಿಕೆ, ಸಿಬ್ಬಂದಿ ವೇತನ ಹಾಗೂ ಆಡಳಿತಾತ್ಮಕ ವೆಚ್ಚಗಳಿಗಾಗಿ ಖರ್ಚು ಭರಿಸಲಾಗುವುದು.

184(368) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆ ಗುಡಿಬಂಡೆ ತಾಲ್ಲೂಕು ಕಛೇರಿ ಕಟ್ಟಡ ಪುರಾತನವಾಗಿದ್ದು ಶಿಥಿಲಾವಸ್ಥೆಗೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಗುಡಿಬಂಡೆ ಪಟ್ಟಣದಲ್ಲಿ ಮಿನಿವಿಧಾನಸೌಧ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಇ) ಹಾಗಿದ್ದಲ್ಲಿ, ಸರ್ಕಾರದ ಈ ಬಗ್ಗೆ ಕೈಗೊಂಡ ಕ್ರಮವೇನು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು):

ಅ) ಹೌದು.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಸಂಪನ್ಮೂಲ ವ್ಯವಸ್ಥೆಯಾಗುತ್ತಲೇ ಮಿನಿವಿಧಾನಸೌಧ ಕಾಮಗಾರಿ ಪ್ರಾರಂಭಿಸ ಲಾಗುವುದು.